## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ರಾಜ್ಯದ 11 ಜಿಲ್ಲೆಗಳಲ್ಲಿ ರಕ್ತವಿಧಳನಾ ಘಟಕಗಳನ್ನು ಸ್ಥಾಪಿಸುವ ಬಗ್ಗೆ.

ಓದಲಾಗಿದೆ:- ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ಇವರ ಏಕ ಕಡತದಲ್ಲಿ ಸಲ್ಲಿಸಿರುವ ಪ್ರಸ್ತಾವನೆ ದಿನಾಂಕ: 29/09/2016.

*****

ಪ್ರಸ್ತಾವನೆ:

ರಾಜ್ಯದ ಬಹುತೇಕ ಭಾಗಗಳಲ್ಲಿ ಚಿಕುಂಗುನ್ಯಾ ಹಾಗೂ ಡೆಂಗ್ಯೂ ರೋಗಗಳಿಗೆ ಸಾರ್ವಜನಿಕರು ತುತ್ತಾಗಿದ್ದು, ಸದರಿ ರೋಗಗಳಿಂದ ಬಳಲುತ್ತಿರುವ ರೋಗಿಗಳಿಗೆ ಅಗತ್ಯವಾದ ಬ್ಲಡ್ ಪ್ಲೇಟ್‌ಲೆಟ್ಸ್‌ಗಳನ್ನು ಸರ್ಕಾರದಿಂದ ಒದಗಿಸಬೇಕಾಗಿರುತ್ತದೆ. ಆದ್ದರಿಂದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿರುವ ರಕ್ತನಿಧಿ ಕೇಂದ್ರಗಳು ಬ್ಲಡ್‌ಪ್ಲೇಟ್ಸ್‌ಗಳನ್ನು ಒದಗಿಸುವ ಸ್ಥಿತಿಯಲ್ಲಿರಬೇಕು. ರಾಜ್ಯದ ಯಾವುದೇ ಮೂಲೆಯಲ್ಲಿ ಬ್ಲಡ್ ಪ್ಲೇಟ್‌ಲೆಟ್ಸ್‌ಗಳ ಅಭಾವದ ಕಾರಣದಿಂದ ಪ್ರಾಣಾಪಾಯದ ಅಂಚಿನಲ್ಲಿರುವವರಿಗೆ ಅಗತ್ಯ ಬ್ಲಡ್ ಪ್ಲೇಟ್‌ಲೆಟ್ಸ್‌ಗಳನ್ನು ಒದಗಿಸಿ ಅವರ ಆತಂಕವನ್ನು ಕಡಿಮೆ ಮಾಡಬೇಕಾಗಿರುತ್ತದೆ.

ಪ್ರಸ್ತುತ ರಾಜ್ಯದಲ್ಲಿ 199 ರಕ್ತನಿಧಿ ಕೇಂದ್ರಗಳಿದ್ದು, ಅದರಲ್ಲಿ 125 ರಕ್ತ ವಿಧಳನಾ ಘಟಕಗಳು ಕಾರ್ಯ ನಿರ್ವಹಿಸುತ್ತಿವೆ. ಈ ಪೈಕಿ 23 ಸರ್ಕಾರದ ರಕ್ತ ವಿಧಳನಾ ಘಟಕಗಳಾಗಿರುತ್ತವೆ. ರಾಜ್ಯದ ಬಾಗಲಕೋಟೆ, ವಿಜಯಪುರ, ಚಾಮರಾಜನಗರ, ಚಿಕ್ಕಮಗಳೂರು, ಚಿತ್ರದುರ್ಗ, ಕಲ್ಬುರ್ಗಿ, ಹಾವೇರಿ, ಮಡಿಕೇರಿ, ಕೋಲಾರ, ತುಮಕೂರು ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ರಕ್ತ ವಿಧಳನಾ ಘಟಕಗಳನ್ನು ಪ್ರಾರಂಭಿಸಲು ಸರ್ಕಾರ ಉದ್ದೇಶಿಸಿದ್ದು, ಈ ಕಾರ್ಯಕ್ರಮಕ್ಕೆ ತಗಲುವ ವೆಚ್ಚವನ್ನು ಕೇಂದ್ರ ಸರ್ಕಾರವು ರಾಷ್ಟ್ರೀಯ ಆರೋಗ್ಯ ಅಭಿಯಾನ ಯೋಜನೆಯಡಿ ಹೆಚ್ಚುವರಿಯಾಗಿ ನೀಡುವ ಪೂರಕ ಅನುದಾನದಿಂದ ಭರಿಸಲು ತೀರ್ಮಾನಿಸಿದೆ. ಆದ್ದರಿಂದ ಈ ಆದೇಶ

**ಸರ್ಕಾರದ ಆದೇಶ ಸಂಖ್ಯೆ: ಆಕುಕ 269 ಸಿಜಿಇ 2016,**

**ಬೆಂಗಳೂರು, ದಿನಾಂಕ: 01-10-2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ರಾಜ್ಯದ ಬಾಗಲಕೋಟೆ, ವಿಜಯಪುರ, ಚಾಮರಾಜನಗರ, ಚಿಕ್ಕಮಗಳೂರು, ಚಿತ್ರದುರ್ಗ, ಕಲ್ಬುರ್ಗಿ, ಹಾವೇರಿ, ಮಡಿಕೇರಿ, ಕೋಲಾರ,

ತುಮಕೂರು ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ರಕ್ತ ವಿಭಜನಾ ಘಟಕಗಳನ್ನು ಪ್ರಾರಂಭಿಸಲು ಸರ್ಕಾರವು ತಾತ್ವಿಕವಾಗಿ ಅನುಮೋದನೆ ನೀಡಿದೆ. ಈ ಯೋಜನೆಗೆ ತಗಲುವ ವೆಚ್ಚವನ್ನು ಕೇಂದ್ರ ಸರ್ಕಾರವು ರಾಷ್ಟ್ರೀಯ ಆರೋಗ್ಯ ಅಭಿಯಾನ ಯೋಜನೆಯಡಿ ಹೆಚ್ಚುವರಿಯಾಗಿ ನೀಡುವ ಪೂರಕ ಅನುದಾನದಿಂದ ಭರಿಸಲು ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ. ಶ್ರೀನಿವಾಸಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

ಇವರಿಗೆ:

1) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
2) ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
3) ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
4) ಅಪರ ನಿರ್ದೇಶಕರು, ಕರ್ನಾಟಕ ಸ್ಟೇಟ್ ಡ್ರಗ್ಸ್ ಅಂಡ್ ಲಾಜಿಸ್ಟಿಕ್ಸ್ ವೇರ್ ಹೌಸಿಂಗ್ ಸೊಸೈಟಿ, ನಂ. 1, ಡಾ: ಸಿದ್ದಯ್ಯಪುರಾಣಿಕ್ ರಸ್ತೆ, ಕೆ.ಹೆಚ್.ಬಿ. ಕಾಲೋನಿ, ಮಾಗಡಿ ರಸ್ತೆ, ಬೆಂಗಳೂರು-79.
5) ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
6) ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಮತ್ತು ಎಲ್ಲಾ ಜಿಲ್ಲಾ ಶಸ್ತ್ರ ಚಿಕಿತ್ಸಕರುಗಳು (ನಿರ್ದೇಶಕರ ಮುಖಾಂತರ)
7) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
8) ಶಾಖಾ ರಕ್ಷಾ ಕಡತ / ಬಿಡಿ ಪ್ರತಿಗಳು.